2

ನಂ. 1 ಕನ್ನಡ ದಿನಪತ್ರಿಕೆ
ವಿಜಯವಾಣಿ
VIJAYAVANI » MYSURU
ಸೋಮವಾರ 27 ನವೆಂಬರ್ 2023
27 NOVEMBER 2023


# ಮೈಸೂರು ಲೋಕಲ್ ಎಕ್ಸ್‌ಪ್ರೆಸ್




ವಿಜಯವಾಣಿ ಚಿತ್ರ

## ಅಭಿನಂದನೆ

ನಗರದ ಮೈಸೂರು-ಬನ್ನೂರು ರಸ್ತೆಯಲ್ಲಿರುವ ಎಟಿಎಂಇ ಇಂಜಿನಿಯರಿಂಗ್ ಕಾಲೇಜಿನ ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ಸ್ ವಿಭಾಗದ ವಿದ್ಯಾರ್ಥಿ ಕೆ.ವಿ.ವಿಖ್ಯಾತ್ ಅವರು ಉತ್ತರ ಕನ್ನಡ ಜಿಲ್ಲೆಯ ಕೆಎಲ್‌ಎಸ್‌ವಿ ದೇಶಪಾಂಡೆ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿಯಿಂದ ಇತ್ತೀಚೆಗೆ ಆಯೋಜಿಸಿದ್ದ ವಿಟಿಯು ರಾಜ್ಯಮಟ್ಟದ ಕುಸ್ತಿ ಪಂದ್ಯಾವಳಿಯಲ್ಲಿ ಚಿನ್ನದ ಪದಕ ಪಡೆದಿದ್ದಾರೆ. ಕಾಲೇಜಿನ ಆಡಳಿತ ಮಂಡಳಿ, ಪ್ರಾಂಶುಪಾಲ ಡಾ.ಎ.ಕೆ.ಮೂರ್ತಿ ಅವರು ವಿದ್ಯಾರ್ಥಿಯನ್ನು ಅಭಿನಂದಿಸಿದರು. ಡೀನ್‌ಗಳಾದ ಡಾ.ಎಂ.ಎಸ್.ಗೋವಿಂದೇಗೌಡ, ಡಾ.ಎಸ್.ಆರ್.ಭಾಗ್ಯಶ್ರೀ, ದೈಹಿಕ ಶಿಕ್ಷಣ ನಿರ್ದೇಶಕ ಡಾ.ಎಂ.ಪಿ.ಮುರಳೀಧರ್ ಇದ್ದರು.